ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

"ವಾರ್ತಾ ಭವನ", ನ್ಯಾಯಾಲಯ ಆವರಣ, ಬೆಳಗಾವಿ-590002. (ದೂರವಾಣಿ ಸಂ: 0831-2420344)
ಅಭಿನಂದನೆಗಳೊಂದಿಗೆ ಪ್ರಕಟಣೆಯ ಕೃಪೆಗಾಗಿ **ದಿನಾಂಕ: 19-12-2018**
ಇ-ಮೇಲ್:- varthabhavanbelagavi@gmail.com ಚಳಿಗಾಲ ಅಧಿವೇಶನ-2018 ಸುವರ್ಣ ವಿಧಾನ ಸೌಧ, ಬೆಳಗಾವಿ

ವಾವಿಸಂ.

## ವಿಧಾನ ಪರಿಷತ್ ಉಪಸಭಾಪತಿಯಾಗಿ
## ಎಸ್.ಎಲ್. ಧರ್ಮೇಗೌಡ ಅವಿರೋಧ ಆಯ್ಕೆ

ಬೆಳಗಾವಿ: ಡಿಸೆಂಬರ್ 19 :(ಕರ್ನಾಟಕ ವಾರ್ತೆ): ವಿಧಾನ ಪರಿಷತ್ತಿನ ಉಪಸಭಾಪತಿಯಾಗಿ ಎಸ್.ಎಲ್. ಧರ್ಮೇಗೌಡ ಅವರು ಇಂದು ಅವಿರೋಧವಾಗಿ ಆಯ್ಕೆಯಾದರು.

ಮಾಜಿ ಶಾಸಕ ಲಕ್ಷ್ಮಯ್ಯ ಅವರ ಪುತ್ರರಾಗಿರುವ ಎಸ್.ಎಲ್. ಧರ್ಮೇಗೌಡ ಅವರು 40 ವರ್ಷಕ್ಕೂ ಹೆಚ್ಚಿನ ರಾಜಕೀಯ ಅನುಭವ ಹೊಂದಿದ್ದು, ತಮ್ಮ ರಾಜಕೀಯ ಜೀವನವನ್ನು ಮಂಡಲಪಂಚಾಯತ್ ಮುಖಾಂತರ ಆರಂಭಿಸಿ ಜಿಲ್ಲಾ ಪಂಚಾಯತ್ ಸದಸ್ಯರಾಗಿಯೂ ಸಹ ಕಾರ್ಯನಿರ್ವಹಿಸಿದ್ದಾರೆ. ವಿಧಾನಸಭೆಯ ಸದಸ್ಯರಾಗಿ ಕೆಳಮನೆಯ ಅನುಭವವಿರುವ ಇವರು ಇದೇ ಮೊದಲ ಬಾರಿಗೆ ವಿಧಾನಪರಿಷತ್ತಿನ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.

ಸಹಕಾರಿ ಕ್ಷೇತ್ರದಲ್ಲಿ ತಮ್ಮನ್ನು ಗುರುತಿಸಿಕೊಂಡಿರುವ ಧರ್ಮೇಗೌಡರು ರಾಷ್ಟ್ರ ಮತ್ತು ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಕ್ರಿಯಾಶೀಲ ವ್ಯಕ್ತಿಯಾಗಿ ಅನೇಕ ಸಂಸ್ಥೆಗಳೊಂದಿಗೆ ದುಡಿದಿದ್ದಾರೆ.

ಸಭಾಪತಿಗಳು ಇಂದಿನ ಚುನಾವಣೆಯಲ್ಲಿ ಧರ್ಮೇಗೌಡರ ಹೆಸರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಿದ ನಂತರ ಮಾತನಾಡಿದ ಸಭಾನಾಯಕಿ ಹಾಗೂ ಸಚಿವೆ ಡಾ.ಜಯಮಾಲಾ ಅವರು ಧರ್ಮೇಗೌಡರು ತಮ್ಮ ಹೆಸರಲ್ಲಿಯೇ ಧರ್ಮವನ್ನು ಹೊಂದಿದ್ದು, ಸದನದಲ್ಲಿ ರಾಜಧರ್ಮವನ್ನು ಪಾಲಿಸಲಿ ಎಂದು ಶುಭ ಕೋರಿದರು.

ವಿರೋಧ ಪಕ್ಷದ ನಾಯಕ ಕೋಟಾ ಶ್ರೀನಿವಾಸ ಪೂಜಾರಿ ಅವರು ಮಾತನಾಡಿ, ವಿಧಾನ ಪರಿಷತ್ತಿನ ಇತಿಹಾಸದಲ್ಲಿಯೇ ಅಣ್ಣ ಮತ್ತು ತಮ್ಮ ಏಕ ಕಾಲದಲ್ಲಿ ಮೇಲ್ಮನೆ ಸದಸ್ಯರಾಗಿ ಆಯ್ಕೆಯಾಗಿರುವುದು ವಿಶಿಷ್ಟವಾಗಿದೆ, ಅಣ್ಣ ಧರ್ಮೇಗೌಡರು ಉಪಸಭಾಪತಿಯಾಗಿದ್ದರೆ ಅವರ ತಮ್ಮ ಬೋಜೆಗೌಡ ಅವರು ಸದಸ್ಯರಾಗಿದ್ದಾರೆ. ಉಪಸಭಾಪತಿಗಳು ವಿರೋಧ ಪಕ್ಷದ ಸದಸ್ಯರಿಗೆ ಹೆಚ್ಚಿನ ಅವಕಾಶವನ್ನು ನೀಡಲಿ ಎಂದು ಹೇಳಿದರು.

ಈ ಸಮಯದಲ್ಲಿ ಉಪಸಭಾಪತಿಗಳ ಕುರಿತು ಹಿರಿಯ ಸದಸ್ಯರಾದ ಬಸವರಾಜ ಹೊರಟ್ಟಿ, ಸಿ.ಎಂ. ಇಬ್ರಾಹಿಂ ಸೇರಿದಂತೆ ಅನೇಕ ಸದಸ್ಯರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡು ಶುಭ ಕೋರಿದರು.

*************

ವಾವಿಸಂ.

## ಬರ ತಾಲೂಕುಗಳಿಗೆ ಹೆಚ್ಚುವರಿ 50 ಲಕ್ಷ ರೂ. ಅನುದಾನ : ಡಿಸೆಂಬರ್ ಅಂತ್ಯದಲ್ಲಿ ಮತ್ತಷ್ಟು ಬರಪೀಡಿತ ತಾಲೂಕುಗಳ ಘೋಷಣೆ : ಕಂದಾಯ ಸಚಿವ ಆರ್.ವಿ. ದೇಶಪಾಂಡೆ

ಬೆಳಗಾವಿ: ಡಿಸೆಂಬರ್ 19 :(ಕರ್ನಾಟಕ ವಾರ್ತೆ): ರಾಜ್ಯದಲ್ಲಿ ಈಗಾಗಲೇ ಘೋಷಣೆಯಾಗಿರುವ ನೂರು ಬರಪೀಡಿತ ತಾಲೂಕುಗಳಿಗೆ ಹೆಚ್ಚುವರಿಯಾಗಿ 50 ಲಕ್ಷ ರೂ. ಬಿಡುಗಡೆ ಮಾಡಲಾಗುವುದು ಹಾಗೂ ಈ ತಿಂಗಳಾಂತ್ಯದಲ್ಲಿ ಮತ್ತಷ್ಟು ಬರಪೀಡಿತ ತಾಲೂಕುಗಳನ್ನು ಘೋಷಣೆ ಮಾಡುವುದಾಗಿ ಕಂದಾಯ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಆರ್.ವಿ. ದೇಶಪಾಂಡೆ ತಿಳಿಸಿದ್ದಾರೆ.

ವಿಧಾನ ಸಭೆಯಲ್ಲಿ ಇಂದು ಬರಗಾಲ ಕುರಿತಂತೆ ನಡೆಸಿದ ಚರ್ಚೆಗೆ ಉತ್ತರಿಸಿ ಅವರು ಕೇಂದ್ರ ಸರ್ಕಾರದ ಬರ ನಿರ್ವಹಣೆ ಕೈಪಿಡಿ-2016 ರ ಅನ್ವಯ ರಾಜ್ಯದಲ್ಲಿ ಈಗಾಗಲೇ ನೂರು ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಲಾಗಿದೆ. ಅಲ್ಲದೇ ಡಿಸೆಂಬರ್ 31 ರ ನಂತರ ಮತ್ತಷ್ಟು ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು. ಈಗಾಗಲೇ ಘೋಷಿಸಿರುವ ಬರಪೀಡಿತ ತಾಲೂಕುಗಳಿಗೆ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು ತಲಾ 50 ಲಕ್ಷ ರೂ. ಬಿಡುಗಡೆ ಮಾಡಲಾಗಿದೆ. ಆದಾಗ್ಯೂ ಬರದ ತೀಕ್ಷ್ಣತೆಯನ್ನು ಗಮನಿಸಿ ಹೆಚ್ಚುವರಿಯಾಗಿ 50 ಲಕ್ಷ ರೂ. ಬಿಡುಗಡೆ ಮಾಡಲಾಗುವುದು.

ರಾಜ್ಯದಲ್ಲಿ ಬರ ನಿರ್ವಹಣೆ ಸಂಬಂಧ ಸರ್ಕಾರ ಮುಂದಾಲೋಚನೆ ಮಾಡಿ ಎಲ್ಲಾ ಅಗತ್ಯ ಕ್ರಮ ಕೈಗೊಂಡಿದೆ. ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸುವ ಸಂಬಂಧ ಕೈಗೊಳ್ಳಬಹುದಾದ ಎಲ್ಲಾ ಕಾರ್ಯಕ್ರಮಗಳಿಗೂ ಯಾವುದೇ ಹಣಕಾಸಿನ ಕೊರತೆ ಇಲ್ಲ ಎಂದು ಸಚಿವರು ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದರು.

ಕರ್ನಾಟಕ ರಾಜ್ಯ ಕಳೆದ 14 ವರ್ಷಗಳಲ್ಲಿ ಬರ ಪರಿಸ್ಥಿತಿ ಎದುರಿಸಿದೆ. ಭಾರತ ಸರ್ಕಾರ ದೇಶದ 24 ಜಿಲ್ಲೆಗಳಲ್ಲಿ ಕರ್ನಾಟಕದ 16 ಜಿಲ್ಲೆಗಳು ನಿರಂತರ ಬರದ ಜಿಲ್ಲೆಗಳೆಂದು ಪ್ರಕಟಿಸಿದೆ. ಈ ಹಿನ್ನೆಲೆಯಲ್ಲಿ ಸತತ ಬರಗಾಲ ಸ್ಥಿತಿಯಲ್ಲಿರುವ ಕರ್ನಾಟಕ ರಾಜ್ಯದಲ್ಲಿನ ಬರಪರಿಸ್ಥಿತಿ ನಿಭಾಯಿಸಲು ರಾಜ್ಯ ಸರ್ಕಾರ ಸಮರೋಪಾದಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಿದೆ.

ಕಳೆದ ಮುಂಗಾರಿನಲ್ಲಿ ಕೊಡಗು, ದಕ್ಷಿಣ ಕನ್ನಡ, ಕರಾವಳಿ ಭಾಗದಲ್ಲಿ ಮಾತ್ರ 804 ಮಿ.ಮೀ. ಮಳೆ ಬಿದ್ದಿದ್ದು, ಉಳಿದ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆಯ ತೀವ್ರ ಕೊರತೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ತೋಟಗಾರಿಕೆ, ಕೃಷಿ ಬೆಳೆಗಳು ಸೇರಿದಂತೆ ಮುಂಗಾರು ಬೆಳೆ ಉತ್ಪಾದನೆಯಲ್ಲಿ ಕುಂಠಿತವಾಗಿದೆ ಹಾಗೂ ಸಾಕಷ್ಟು ಬೆಳೆಹಾನಿ ಸಂಭವಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಇನ್‌ಪುಟ್ ಸಬ್ಸಿಡಿ ಪರಿಹಾರಗಳನ್ನು ಈಗಾಗಲೇ ರಾಜ್ಯದ ರೈತರಿಗೆ ವಿತರಣೆ ಮಾಡಲಾಗಿದೆ.

ರಾಜ್ಯದಲ್ಲಿ ಉಲ್ಬಣಿಸಿರುವ ಬರ ಪರಿಸ್ಥಿತಿಯನ್ನು ಎಲ್ಲಾ ಇಲಾಖೆಗಳ ಸಹಕಾರದಿಂದ ನಿಭಾಯಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ಸಲುವಾಗಿ ಏಳು ಸಚಿವ ಸಂಪುಟ ಸಭೆಗಳನ್ನು ಮಾಡಲಾಗಿದೆ. ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಜಿಲ್ಲಾ ಉಸ್ತುವಾರಿ ಸಚಿವರಿಗೆ ಮುಖ್ಯಮಂತ್ರಿಯವರು ಪತ್ರ ಬರೆದು ಬರ ನಿರ್ವಹಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

ಬರಗಾಲಕ್ಕೆ ತುತ್ತಾಗಿರುವ ತಾಲೂಕುಗಳಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಆದ್ಯತೆ ಮೇಲೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಬರಪೀಡಿತ ತಾಲೂಕುಗಳೆಂದು ಘೋಷಣೆ ಆಗದ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವ ತಾಲೂಕುಗಳಿಗೂ ತಲಾ 25 ಲಕ್ಷ ರೂ. ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗಿದೆ.

ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ರಾಜ್ಯದ 17 ಜಿಲ್ಲೆಗಳ 209 ಗ್ರಾಮಗಳಲ್ಲಿ 409 ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಅಲ್ಲದೇ 382 ಖಾಸಗಿ ಕೊಳವೆಬಾವಿ ಮಾಲೀಕರೊಂದಿಗೆ ಕುಡಿಯುವ ನೀರು ಒದಗಿಸಲು ಒಪ್ಪಂದ ಮಾಡಿಕೊಳ್ಳಲಾಗಿದೆ. ಅಲ್ಲದೇ ಆಯಾ ತಾಲೂಕುಗಳಲ್ಲಿ ತಹಶೀಲ್ದಾರರ ಪಿ.ಡಿ. ಖಾತೆಗಳಲ್ಲಿ ಕನಿಷ್ಠ 10 ಲಕ್ಷ ರೂ.ಹಣ ಇಡಲಾಗಿದೆ ಎಂದು ಸಚಿವ  ಆರ್.ವಿ. ದೇಶಪಾಂಡೆ ತಿಳಿಸಿದರು.

ರಾಜ್ಯದಲ್ಲಿ ಜಾನುವಾರುಗಳಿಗೆ 92.62 ಮೆಟ್ರಿಕ್‌ಟನ್ ಮೇವಿನ ಅಗತ್ಯವಿದೆ. ಈಗಾಗಲೇ ಪಶುಸಂಗೋಪನೆ ಇಲಾಖೆಯಿಂದ 15 ಕೋಟಿ. ರೂ. ವೆಚ್ಚದಲ್ಲಿ ಮೇವಿನ ಮಿನಿ ಕಿಟ್‌ಗಳನ್ನು ವಿತರಿಸಲಾಗಿದೆ. ಜಿಲ್ಲಾಧಿಕಾರಿಗಳ ಮೂಲಕ ಮೇವು ಸಂಗ್ರಹಣಾ ಕೇಂದ್ರ ಹಾಗೂ ಗೋಶಾಲೆಗಳನ್ನು ನಿರ್ಮಿಸಲು ಸ್ಥಳ ಗುರುತಿಸಲಾಗಿದ್ದು, ರಾಜ್ಯದಲ್ಲಿ 224 ಮೇವು ಸಂಗ್ರಹಣಾ ಕೇಂದ್ರಗಳು ಹಾಗೂ 294 ಗೋಶಾಲೆಗಳನ್ನು ತೆರೆಯಲು ಉದ್ದೇಶಿಸಲಾಗಿದೆ. ಅಲ್ಲದೇ ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ಇನ್ನಿತರ ಕೆಲವು ಜಿಲ್ಲೆಗಳಲ್ಲಿ ಹಸಿರು ಮೇವು ಬೆಳೆಯಲು ಹೆಚ್ಚುವರಿಯಾಗಿ ಕಿಟ್‌ಗಳನ್ನು ವಿತರಿಸಲಾಗಿದೆ.

ಬರಗಾಲದ ಸ್ಥಿತಿಯಲ್ಲಿ ರಾಜ್ಯದ ಜನರು ಉದ್ಯೋಗ ಅರಸಿ ಗುಳೆ ಹೋಗುವುದನ್ನು ತಪ್ಪಿಸಲು ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಹೆಚ್ಚುವರಿ ಉದ್ಯೋಗಗಳನ್ನು ಸೃಜಿಸಲಾಗಿದೆ.

ಪ್ರತಿ ಜಾಬ್‌ಕಾರ್ಡ್‌ದಾರರಿಗೆ ಪ್ರಸ್ತುತ ಈಗಿರುವ ವಾರ್ಷಿಕ 100 ದಿನಗಳನ್ನು ಪರಿಷ್ಕರಿಸಿ 150 ದಿನಗಳಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ. ಅಲ್ಲದೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮೂಲಕ ಉದ್ಯೋಗ ಖಾತ್ರಿ ಯೋಜನೆಯಡಿ ದಾಖಲೆಯ ಉದ್ಯೋಗಗಳನ್ನು ಸೃಜಿಸಲು ಚಿಂತಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಬರಪೀಡಿತ ತಾಲೂಕುಗಳಲ್ಲಿ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು ಪ್ರವಾಸ ಕೈಗೊಳ್ಳುವ ಮೂಲಕ, ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನೆ ಮಾಡಲಾಗುತ್ತಿದೆ. ಅಲ್ಲದೇ ಅಭಿವೃದ್ಧಿ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿಯವರ ನೇತೃತ್ವದಲ್ಲಿ ಹವಾಮಾನ ನಿಗಾವಹಿಸಲಾಗುತ್ತಿದೆ.

ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ 5 ಕೋಟಿಯಂತೆ ರಾಜ್ಯಾದ್ಯಂತ 226 ಕೋಟಿ ರೂ. ಅನುದಾನ ಲಭ್ಯವಿದೆ. ಈಗಾಗಲೇ ಎಪ್ರೀಲ್ ನಿಂದ ನವೆಂಬರ್ ವರೆಗೆ 142.58 ಕೋಟಿ ರೂ. ವೆಚ್ಚ ಮಾಡಲಾಗಿದೆ. ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿರುವ ಅನುದಾನ 5 ರೂ. ಕೋಟಿಗಿಂತ ಕಡಿಮೆ ಇದ್ದಲ್ಲಿ ಅನುದಾನದ ಬೇಡಿಕೆಯನ್ವಯ ಮಂಜೂರಾತಿ ನೀಡಲಾಗುವುದು. ಬರಪರಿಸ್ಥಿತಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಯಾವುದೇ ಹಣಕಾಸಿನ ಕೊರತೆ ಇಲ್ಲ.

ಈ ವರ್ಷದ ಮುಂಗಾರಿನಲ್ಲಿ ಕೊಡಗು ಜಿಲ್ಲೆಯಲ್ಲಿ ಉಂಟಾದ ಪ್ರವಾಹ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದಿಂದ 546 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಈಗಾಗಲೇ ಬೆಳೆಯ ಹಾನಿ ಸಂತ್ರಸ್ಥ ರೈತರ ಖಾತೆಗೆ ಪರಿಹಾರ ಜಮಾ ಮಾಡಲಾಗುತ್ತಿದೆ. ಮುಂದಿನ ಒಂದು ವಾರದೊಳಗಾಗಿ ಜಿಲ್ಲೆಯ ಎಲ್ಲಾ ರೈತರ ಖಾತೆಗಳಲ್ಲಿ ಈ ಪರಿಹಾರ ಹಣ ಜಮಾ ಆಗಲಿದೆ. ಅಲ್ಲದೇ ಅತಿವೃಷ್ಟಿಯಿಂದ ಜೀವಹಾನಿಗೊಳಗಾದ ಸಂತ್ರಸ್ಥ ಕುಟುಂಬಗಳಿಗೆ ಕೇಂದ್ರ ಹಾಗೂ ರಾಜ್ಯಸರ್ಕಾರದ ಪರಿಹಾರ ಸೇರಿ ತಲಾ 7 ಲಕ್ಷ ರೂ. ಪರಿಹಾರ ವಿತರಿಸಲಾಗಿದೆ.

ಮುಂಗಾರಿನಲ್ಲಿ ರಾಜ್ಯದಲ್ಲಿ ಸಂಭವಿಸಿದ ಅತಿವೃಷ್ಟಿ ಹಾನಿ ಸಮೀಕ್ಷೆಗೆ ಕೇಂದ್ರ ಸರ್ಕಾರದ ತಂಡ ಆಗಮಿಸಿ ಸುಮಾರು 13 ಜಿಲ್ಲೆಗಳಲ್ಲಿ ಪ್ರವಾಸ ಮಾಡಿತ್ತು. ಈ ಸಂದರ್ಭದಲ್ಲಿ ಅತಿವೃಷ್ಟಿ ನಿರ್ವಹಣೆಯಲ್ಲಿ ರಾಜ್ಯಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ತಂಡ ಪ್ರಶಂಸೆ ವ್ಯಕ್ತಪಡಿಸಿದೆ. ಆದರೂ ಮಹಾರಾಷ್ಟ್ರ, ಗುಜರಾತ್, ತಮಿಳುನಾಡು, ಆಂಧ್ರಪ್ರದೇಶ ಹಾಗೂ ರಾಜಸ್ಥಾನಗಳಿಗೆ ಹೋಲಿಸಿದರೆ ರಾಜ್ಯಸರ್ಕಾರಕ್ಕೆ ಬಿಡುಗಡೆಯಾಗಿರುವ ಮೊತ್ತ ಅತ್ಯಂತ ಕಡಿಮೆ ಇದೆ. ಈ ಸಂಬಂಧ

ಮುಖ್ಯಮಂತ್ರಿಯವರು ಪ್ರಧಾನಮಂತ್ರಿಯವರಿಗೆ ಪತ್ರ ಬರೆದಿದ್ದು, ಕೇಂದ್ರ ಸರ್ಕಾರದಿಂದ ಸಕಾರಾತ್ಮಕ ಉತ್ತರ ದೊರೆತಿದೆ. ಹೆಚ್ಚುವರಿ ಅನುದಾನ ಬಿಡುಗಡೆಯಾಗುವ ವಿಶ್ವಾಸ ಇದೆ ಎಂದು ಸಚಿವರು ತಿಳಿಸಿದರು.

**************

ವಾವಿಸಂ.01

**"ನಗರಾಸ್ತಿ ಮಾಲೀಕತ್ವದ ಹಕ್ಕುದಾಖಲೆಗಳ ಯೋಜನೆ"**

ಬೆಳಗಾವಿ, ಡಿಸೆಂಬರ್ 19 :(ಕರ್ನಾಟಕ ವಾರ್ತೆ): ನಗರ ಪ್ರದೇಶದ ಪ್ರತಿಯೊಂದು ಆಸ್ತಿಯನ್ನು ಅಳತೆ ಮಾಡಿ ಮಾಲೀಕತ್ವದ ಹಕ್ಕುದಾಖಲೆಗಳಾದ ಪ್ರಾಪರ್ಟಿ ರೆಜಿಸ್ಟ್ರೇಷನ್ ಕಾರ್ಡ್‍ಗಳನ್ನು ಸಿದ್ಧಪಡಿಸುವಂತಹ "ನಗರಾಸ್ತಿ ಮಾಲೀಕತ್ವದ ಹಕ್ಕುದಾಖಲೆಗಳ ಯೋಜನೆ"ಯಡಿಯಲ್ಲಿ ಪ್ರಸ್ತುತ ರಾಜ್ಯದ ಮೈಸೂರು, ಶಿವಮೊಗ್ಗ ಮತ್ತು ಮಂಗಳೂರು ನಗರಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಆರ್.ವಿ. ದೇಶಪಾಂಡೆ ಅವರು ರಾಜ್ಯ ವಿಧಾನ ಸಭೆಯಲ್ಲಿ ಹೇಳಿದರು.

ಪ್ರಶ್ನೋತ್ತರ ಕಲಾಪ ವೇಳೆಯಲ್ಲಿ ಶಾಸಕ ರಿಜ್ವಾನ್ ಅರ್ಷದ್ ಅವರ ಪರವಾಗಿ ಶರಣಪ್ಪ ಮಟ್ಟೂರ ಅವರು ಕೇಳಿದ ಚುಕ್ಕಿ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವ ಆರ್.ವಿ. ದೇಶಪಾಂಡೆ ಅವರು ಈಗಾಗಲೇ ಪ್ರಥಮ ಹಂತದಲ್ಲಿ ಬೆಂಗಳೂರು ನಗರದ 60 ವಾರ್ಡ್‍ಗಳಲ್ಲಿ ಸರ್ವೆ ಆಫ್ ಇಂಡಿಯಾದವರ ಸಹಯೋಗದಲ್ಲಿ ಡ್ರೋನ್/ಯುಎವಿ ಆಧಾರಿತ ಸರ್ವೆ ಕಾರ್ಯಕ್ಕಾಗಿ ಇಲಾಖೆಯಿಂದ ತಂಡಗಳನ್ನು ರಚಿಸಿ ಫ್ಲೈಯಿಂಗ್ ಪ್ರಾರಂಭಿಸಲಾಗಿರುತ್ತದೆ. ಸರ್ವೆ ಆಫ್ ಇಂಡಿಯಾದವರು ಡಾಟಾ ಪ್ರೊಸೆಸಿಂಗ್ ಮಾಡಿ ಇಲಾಖೆಗೆ ಒದಗಿಸಿದ ತಕ್ಷಣ ಇಲಾಖಾ ಸಿಬ್ಬಂದಿಯ ಮೂಲಕ ಪರಿಶೀಲನಾ ಕಾರ್ಯ ಮತ್ತು ಆಸ್ತಿ ದಾಖಲೆಗಳ ಸೃಜನಾ ಕಾರ್ಯವನ್ನು ಕೈಗೊಳ್ಳಲಾಗುವುದು. ಇದೇ ರೀತಿ ಇನ್ನುಳಿದ ವಾರ್ಡ್‍ಗಳಲ್ಲಿಯೂ ಸಹ ಹಂತ ಹಂತವಾಗಿ ಪೂರ್ಣಗೊಳಿಸುವ ಗುರಿ ಹೊಂದಲಾಗಿರುತ್ತದೆ ಎಂದು ಸಚಿವರು ಸದನದಲ್ಲಿ ತಿಳಿಸಿದರು.

***************

ವಾವಿಸಂ.01

## ಡಿ.26 ರಂದು ಮೂಡಿಗೆರೆಗೆ ಭೇಟಿ

## ಮಾನವ ಪ್ರಾಣಿ ಸಂಘರ್ಷ ಪರಿಹಾರಕ್ಕೆ ಪ್ರಯತ್ನ : ಸಚಿವ ಆರ್.ಶಂಕರ್

ಬೆಳಗಾವಿ, ಡಿಸೆಂಬರ್ 19 :(ಕರ್ನಾಟಕ ವಾರ್ತೆ): ಬರುವ ಡಿಸೆಂಬರ್ 26 ರಂದು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆಗೆ ಭೇಟಿ ನೀಡಿ ಅಲ್ಲಿ ನಡೆಯುತ್ತಿರುವ ಕಾಡಾನೆಗಳ ದಾಳಿ, ಮಾನವ ಪ್ರಾಣ ಹಾನಿ ಕುರಿತು ಸ್ಥಳೀಯರೊಂದಿಗೆ ಖುದ್ದಾಗಿ ಚರ್ಚಿಸಿ ಸಲಹೆ ಪಡೆಯಲಾಗುವುದು. ಸಮಸ್ಯೆ

ಪರಿಹಾರಕ್ಕೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಕೊಡಗು ಜಿಲ್ಲೆಗೂ ಕೂಡ ಭೇಟಿ ನೀಡಲಾಗುವುದು. ಮುಖ್ಯಮಂತ್ರಿಯವರು ಈ ಕಾರ್ಯಕ್ಕೆ ಸಾಕಷ್ಟು ಹಣ ಒದಗಿಸಲು ಸಿದ್ಧವಿದ್ದಾರೆ ಎಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾದ ಆರ್. ಶಂಕರ್ ಅವರು ರಾಜ್ಯ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಂ.ಕೆ. ಪ್ರಾಣೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮೂಡಿಗೆರೆ ತಾಲೂಕಿನಲ್ಲಿ ರೈತರ ಜಮೀನಿನಲ್ಲಿ ಒಂಟಿ ಸಲಗವೊಂದು ದಾಳಿ ನಡೆಸಿದೆ. ಈ ಆನೆಯನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯಾಚರಣೆಗೆ ಸಕ್ರಬೈಲು ಆನೆ ಬಿಡಾರದಿಂದ ಎರಡು ಸಾಕಾನೆಗಳನ್ನು ನಿಯೋಜಿಸಲಾಗಿದೆ. ಕಾರ್ಯಾಚರಣೆ ಪ್ರಗತಿಯಲ್ಲಿದೆ. ಕಾಡಾನೆಗಳ ದಾಳಿ ತಡೆಗಟ್ಟಲು 2017–18ನೇ ಸಾಲಿನಲ್ಲಿ 21.6 ಕಿ.ಮೀ ಆನೆ ನಿರೋಧಕ ಕಂದಕ, 15 ಕಿ.ಮೀ ಸೌರವಿದ್ಯುತ್ ತಂತಿ ಬೇಲಿ (ಸೋಲಾರ್ ಫೆನ್ಸಿಂಗ್) ನಿರ್ಮಾಣ ಮತ್ತು ನಿರ್ವಹಣೆ ಕಾರ್ಯಕೈಗೊಳ್ಳಲಾಗಿದೆ. ಚಿಕ್ಕಮಗಳೂರು, ಕೊಪ್ಪ ಹಾಗೂ ಭದ್ರಾಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಆನೆ ಹಿಮ್ಮೆಟ್ಟಿಸುವ 19 ಕ್ಯಾಂಪ್‌ಗಳಿವೆ. ವನ್ಯ ಪ್ರಾಣಿಗಳ ದಾಳಿಯಿಂದ 2016–17ರಲ್ಲಿ ಒಬ್ಬರು ಹಾಗೂ 2018–19ನೇ ಸಾಲಿನಲ್ಲಿ ಒಬ್ಬರು ಪ್ರಾಣ ಕಳೆದುಕೊಂಡಿದ್ದಾರೆ. ಇವರ ಕುಟುಂಬಕ್ಕೆ ತಲಾ 5 ಲಕ್ಷ ರೂಪಾಯಿ ದಯಾತ್ಮಕ ಧನ ಪಾವತಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಸಚಿವರ ಉತ್ತರದಿಂದ ಸಮಾಧಾನಗೊಳ್ಳದ ಸದಸ್ಯರಾದ ಎಂ.ಕೆ.ಪ್ರಾಣೇಶ್ ಹಾಗೂ ಸುನೀಲ್ ಸುಬ್ರಮಣಿ ಸದನದ ಬಾವಿಗೆ ಇಳಿದು ಧರಣಿ ನಡೆಸಲು ಮುಂದಾದರು. ಆಗ ಮಧ್ಯಪ್ರವೇಶಿಸಿದ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ಅವರು ಸಚಿವರು ಉತ್ತರ ಪೂರ್ಣಗೊಳಿಸಲು ಮೊದಲು ಅವಕಾಶ ನೀಡಿ ಎಂದು ಸೂಚಿಸಿದರು. ಸಭಾಪತಿಯವರ ಸೂಚನೆ ಮೇರೆಗೆ ಸದಸ್ಯರು ತಮ್ಮ ಸ್ಥಾನಗಳಿಗೆ ಮರಳಿದರು.

ಈ ಸಂದರ್ಭದಲ್ಲಿ ಸದನದಲ್ಲಿ ಹಾಜರಿದ್ದ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಕೆ.ಜೆ.ಜಾರ್ಜ್ ಅವರು ಮಾತನಾಡಿ, ಮಾನವ ಪ್ರಾಣಿ ಸಂಘರ್ಷದ ಸಮಸ್ಯೆ ನಿನ್ನೆ ಮೊನ್ನೆಯದಲ್ಲ. ಇದರ ಪರಿಹಾರಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿವೆ. ಅರಣ್ಯದಲ್ಲಿ ವನ್ಯ ಪ್ರಾಣಿಗಳಿಗೆ ಸಾಕಾಗುವಷ್ಟು ಆಹಾರ, ನೀರು ಲಭ್ಯವಾಗದಿರುವುದು ಮುಖ್ಯ ಕಾರಣವಾಗಿದೆ. ಪ್ರಾಣಿಗಳು ಒಂದು ಬಾರಿ ಸಮೀಪದ ಕಾಫಿ ಅಥವಾ ಇತರೆ ತೋಟಗಳಿಗೆ ನುಗ್ಗಿದರೆ ಪ್ರತಿಬಾರಿ ಅಲ್ಲಿಗೆ ಬರಲು ರೂಢಿಸಿಕೊಳ್ಳುತ್ತವೆ. ಸರ್ಕಾರ, ಸಚಿವರು ನೀತಿಗಳನ್ನು ರೂಪಿಸಬಹುದು ಸ್ಥಳೀಯ ಅಧಿಕಾರಿಗಳು ಅವುಗಳನ್ನು ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸಿದರೆ ಮಾತ್ರ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಾಧ್ಯ. ವನ್ಯ ಜೀವಿ ರಕ್ಷಣೆಗಾಗಿ ಹೋರಾಡುವ ಸಂಘ–ಸಂಸ್ಥೆಗಳು ಮಾನವ ಜೀವ ರಕ್ಷಣೆಗೆ ಸರ್ಕಾರದೊಂದಿಗೆ ಸಹಕರಿಸಬೇಕು ಎಂದರು.

**********

ವಾವಿಸಂ.01

## ಕಸ್ತೂರಿ ರಂಗನ್ ವರದಿ ಸಂಪುಟ ಉಪಸಮಿತಿಯಿಂದ ತಿರಸ್ಕಾರ

ಬೆಳಗಾವಿ, ಡಿಸೆಂಬರ್ 19 :(ಕರ್ನಾಟಕ ವಾರ್ತೆ): ಪಶ್ಚಿಮ ಘಟ್ಟಗಳ ರಕ್ಷಣೆಗೆ ಕಸ್ತೂರಿ ರಂಗನ್ ಸಮಿತಿಯ ವರದಿಯನ್ನು ಸ್ಥಳೀಯರು ವಿರೋಧಿಸುತ್ತಿದ್ದಾರೆ. ವರದಿ ಅನುಷ್ಠಾನದಿಂದ ಕೈಗಾರಿಕೆ ಮತ್ತು ಇತರ ಚಟುವಟಿಕೆಗಳ ಮೇಲೆ ಗಂಭೀರ ಪರಿಣಾಮ ಉಂಟಾಗುವುದರಿಂದ ಈಗಾಗಲೇ ಸಚಿವ ಸಂಪುಟ ಉಪಸಮಿತಿಯು ಈ ವರದಿಯ ಶಿಫಾರಸ್ಸುಗಳನ್ನು ತಿರಸ್ಕರಿಸಿದೆ. ಸಂಪುಟ ಸಭೆಯಲ್ಲಿ ಚರ್ಚಿಸಿ ಸರ್ಕಾರ ಮುಂದಿನ ನಿರ್ಧಾರ ಕೈಗೊಳ್ಳಲಿದೆ ಎಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾದ ಆರ್. ಶಂಕರ್ ಅವರು ರಾಜ್ಯ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಐವನ್ ಡಿ'ಸೋಜಾ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಸ್ತೂರಿ ರಂಗನ್ ಸಮಿತಿಯ ವರದಿಗಳ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವು ದಿನಾಂಕ 03–10–2018 ರಂದು ನಾಲ್ಕನೇ ಕರಡು ಅಧಿಸೂಚನೆ ಹೊರಡಿಸಿದೆ. ಈ ಅಧಿಸೂಚನೆಗೆ ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ 03–01–2019ರವರೆಗೆ ಕಾಲಾವಕಾಶ ವಿಸ್ತರಿಸಲಾಗಿದೆ.

ಕರಡು ಅಧಿಸೂಚನೆಯ ಪ್ರದೇಶಗಳಲ್ಲಿನ ನಿವಾಸಿಗಳ ಸ್ಥಳಾಂತರಕ್ಕೆ ಅವಕಾಶ ಕಲ್ಪಿಸಿಲ್ಲ ಆದ್ದರಿಂದ ಜನರು ನಿರಾಶ್ರಿತರಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. ಕೆಲವು ನಿಯಮಗಳ ಕಾರಣದಿಂದಾಗಿ ಕೈಗಾರಿಕೆಗಳು, ಕಲ್ಲು ಗಣಿಗಾರಿಕೆ, ಮರಳು ಗಣಿಗಾರಿಕೆ, ಜಲವಿದ್ಯುತ್ ಮತ್ತಿತರ ಅಭಿವೃದ್ಧಿ ಕಾಮಗಾರಿಗಳ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗಲಿದೆ. ಕೇಂದ್ರವು ಪದೇ–ಪದೆ ಅಧಿಸೂಚನೆಯನ್ನು ಕಳಿಸುತ್ತಿದೆ ರಾಜ್ಯ ಇದನ್ನು ಒಪ್ಪುವುದಿಲ್ಲ ಎಂದು ಸಚಿವ ಆರ್.ಶಂಕರ್ ಅವರು ವಿವರಿಸಿದರು.

ಸದಸ್ಯ ಸಿ.ಎಂ.ಇಬ್ರಾಹಿಂ ಅವರು ಮಾತನಾಡಿ ಈಗಾಗಲೇ ಕಸ್ತೂರಿ ರಂಗನ್ ಸಮಿತಿ ವರದಿಯನ್ನು ಕೇರಳ ರಾಜ್ಯ ತಿರಸ್ಕರಿಸಿದೆ. ರಾಜ್ಯ ಸರ್ಕಾರವೂ ಇದನ್ನು ತಿರಸ್ಕರಿಸಬೇಕು. 1930ರ ದಶಕದಲ್ಲಿ ನಿರ್ಮಾಣವಾಗಿರುವ ಕೊಡಗು ಮತ್ತು ಕೇರಳ ನಡುವೆ ಸಂಪರ್ಕ ಕಲ್ಪಿಸುವ ಸೇತುವೆ ಶಿಥಿಲವಾಗಿದೆ ಅದನ್ನು ಪುನರ್ ನಿರ್ಮಿಸಬೇಕು ಎಂದರು.

********

ವಾವಿಸಂ.01

## ಧಾರ್ಮಿಕ ದತ್ತಿ ನಿಯಮಗಳಿಗೆ ತಿದ್ದುಪಡಿ ತಂದು ದೇವಾಲಯಗಳ ತಾತ್ಕಾಲಿಕ ನೌಕರರಿಗೆ ವೇತನ ಶ್ರೇಣಿ ನಿಗದಿ

ಬೆಳಗಾವಿ, ಡಿಸೆಂಬರ್ 19 :(ಕರ್ನಾಟಕ ವಾರ್ತೆ): ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 2011ರ 8ನೇ ನಿಯಮಕ್ಕೆ ತಿದ್ದುಪಡಿ ತಂದು ದೇವಾಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ 2568 ತಾತ್ಕಾಲಿಕ ನೌಕರರಿಗೆ ವೇತನ ತಾರತಮ್ಯ ಸರಿಪಡಿಸಲು ಸೂಕ್ತ ವೇತನ ಶ್ರೇಣಿ ನಿಗದಿಪಡಿಸಲಾಗುವುದು ಎಂದು ಗಣಿ ಮತ್ತು ಭೂವಿಜ್ಞಾನ

ಹಾಗೂ ಮುಜರಾಯಿ ಸಚಿವ ರಾಜಶೇಖರ್ ಬಿ.ಪಾಟೀಲ ರಾಜ್ಯ ವಿಧಾನಪರಿಷತ್‌ನಲ್ಲಿ ಇಂದು ಹೇಳಿದರು.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಂ.ಸಿ.ವೇಣುಗೋಪಾಲ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ದೇವಾಲಯಗಳಲ್ಲಿ ಕರ್ತವ್ಯ ನಿರ್ವಹಿಸುವ ನೌಕರರು ದೇವಾಲಯದ ನೌಕರರಾಗಿರುತ್ತಾರೆಯೇ ಹೊರತು ಸರ್ಕಾರಿ ನೌಕರರಲ್ಲ. ಇವರಿಗೆ ವೇತನ ಶ್ರೇಣಿ ನೀಡಲು ನಿಯಮ ರೂಪಿಸಲಾಗಿದೆ. ದೇವಾಲಯದ ವಾರ್ಷಿಕ ಆದಾಯದಲ್ಲಿ ಸಿಬ್ಬಂದಿ ವೆಚ್ಚವು ಶೇಕಡಾ 35 ಮೀರದಂತೆ ವೇತನ ಶ್ರೇಣಿ ನೀಡಬೇಕಾಗಿದೆ. ಈಗಾಗಲೇ 1111 ನೌಕರರುಗಳಿಗೆ ಐದನೇ ವೇತನ ಶ್ರೇಣಿ ನೀಡಲಾಗುತ್ತಿದೆ. 2568 ತಾತ್ಕಾಲಿಕ ನೌಕರರಿಗೆ ವೇತನ ತಾರತಮ್ಯ ಸರಿಪಡಿಸಲು ಧಾರ್ಮಿಕ ದತ್ತಿ ಆಯುಕ್ತರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳನ್ನು ಒಳಗೊಂಡ ಸಮಿತಿಯು ದಿನಾಂಕ 07-12-2018 ರಂದು ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ವರದಿ ಪರಿಶೀಲಿಸಿ ದೇವಾಲಯಗಳ ಆದಾಯ ಮತ್ತು ವೆಚ್ಚದ ಪೂರ್ಣ ಅಂಕಿ ಅಂಶ ಪಡೆದು ವೇತನ ಶ್ರೇಣಿ ಜಾರಿಗೊಳಿಸಲಾಗುವುದು ಎಂದು ಸದನಕ್ಕೆ ಮಾಹಿತಿ ನೀಡಿದರು.

*******

ವಾವಿಸಂ.01

## ಸವದತ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ
## 120 ಕೋಟಿ ರೂ. ವೆಚ್ಚದಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ

ಬೆಳಗಾವಿ, ಡಿಸೆಂಬರ್ 19 :(ಕರ್ನಾಟಕ ವಾರ್ತೆ): ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ರಾಜ್ಯ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ 'ಎ' ಶ್ರೇಣಿ ಅಧಿಸೂಚಿತ ಸಂಸ್ಥೆಯಾಗಿದೆ. ವಿವಿಧ ಇಲಾಖೆಗಳ 90 ಕೋಟಿ ರೂ. ಅನುದಾನ ಹಾಗೂ ದೇವಾಲಯದ ನಿಧಿಯ 30 ಕೋಟಿ ರೂಪಾಯಿ ಸೇರಿ ಒಟ್ಟು 120 ಕೋಟಿ ರೂ.ಗಳ ವೆಚ್ಚದಲ್ಲಿ ಕುಡಿಯುವ ನೀರು, ಶೌಚಾಲಯ, ಸ್ನಾನಗೃಹ ನಿರ್ಮಾಣ, ಸ್ವಚ್ಛತೆ ಹಾಗೂ ವಸತಿ ಸೌಲಭ್ಯಗಳನ್ನು ಮಾಸ್ಟರ್ ಪ್ಲಾನ್‌ನಂತೆ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವ ರಾಜಶೇಖರ್ ಬಿ.ಪಾಟೀಲ ರಾಜ್ಯ ವಿಧಾನಪರಿಷತ್‌ನಲ್ಲಿ ಇಂದು ಹೇಳಿದರು.

ಪ್ರಶ್ನೋತ್ತರ ವೇಳೆಯಲ್ಲಿ ವಿರೋಧ ಪಕ್ಷದ ಮುಖ್ಯಸಚೇತಕ ಮಹಾಂತೇಶ ಕವಟಗಿಮಠ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸವದತ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಕರ್ನಾಟಕ, ಮಹಾರಾಷ್ಟ್ರ, ಗೋವಾ ಹಾಗೂ ಆಂಧ್ರಪ್ರದೇಶದ ರಾಜ್ಯಗಳಿಂದ ಲಕ್ಷಾಂತರ ಭಕ್ತರು ಭೇಟಿ ನೀಡುತ್ತಿದ್ದಾರೆ. ದೇವಾಲಯಕ್ಕೆ ಆಗಮಿಸುವ ಭಕ್ತರಿಗೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ದೇವಾಲಯ ನಿಧಿಯಿಂದ 30 ಕೋಟಿ ರೂಪಾಯಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಹಾಗೂ ಲೋಕೋಪಯೋಗಿ ಇಲಾಖೆಗಳಿಂದ 90 ಕೋಟಿ ರೂಪಾಯಿ ಅನುದಾನ ಸೇರಿ ಒಟ್ಟು 120 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

ಮಲಪ್ರಭಾ ನದಿಯ ನವೀಲುತೀರ್ಥ ಜಲಾಶಯದಿಂದ ಕುಡಯುವ ಹಾಗೂ ಬಳಕೆ ನೀರನ್ನು ಪೂರೈಸಲಾಗುತ್ತಿದೆ. ಹೆಚ್ಚುವರಿ ನೀರು ಸರಬರಾಜು ಮಾಡುವ ಯೋಜನೆ ಪ್ರಗತಿಯಲ್ಲಿದೆ. ಐದು ಸಮುಚಯಗಳಲ್ಲಿ ಶೌಚಾಲಯ, ಸ್ನಾನಗೃಹಗಳು ಹಾಗೂ ಎಣ್ಣೆ ಹೊಂಡದಲ್ಲಿ ಮಹಿಳೆಯರಿಗೆ ಹಾಗೂ ಪುರಷರಿಗೆ ಪ್ರತ್ಯೇಕ ಸ್ನಾನಗೃಹ ನಿರ್ಮಾಣ ಮಾಡಲಾಗುತ್ತಿದೆ. ದೇವಸ್ಥಾನದ ಆವರಣ ಮತ್ತು ಸುತ್ತಲಿನ ಹತ್ತು ಎಕರೆ ಪ್ರದೇಶದಲ್ಲಿ ದಿನನಿತ್ಯ 45 ಜನ ಕೆಲಸಗಾರರಿಂದ ಹೊರಗುತ್ತಿಗೆ ಅಡಿ ಸ್ವಚ್ಛತೆ ಕಾರ್ಯ ನಿರ್ವಹಿಸಲಾಗುತ್ತಿದೆ. ಭಕ್ತರ ವಸತಿಗೆ 106 ಕೊಠಡಿಗಳು ಹಾಗೂ ಡಾರ್ಮೆಟರಿಗಳು ಈಗ ಬಳಕೆಯಲ್ಲಿವೆ. ಇನ್ನೂ ಹೆಚ್ಚಿನ 246 ಕೊಠಡಿಗಳ ಅತಿಥಿಗೃಹ ಕಟ್ಟಡ ಪೂರ್ಣಗೊಳ್ಳುವ ಹಂತದಲ್ಲಿದೆ ಎಂದು ಸಚಿವರು ವಿವರಿಸಿದರು.

*******